# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಸಾರ್ವಜನಿಕ ಉದ್ದಿಮೆಗಳ ಉದ್ಯೋಗಿಗಳಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ನಡೆಸುವ ಕುರಿತು ಮಾರ್ಗಸೂಚಿಗಳು.

**ಓದಲಾಗಿದೆ:**
1) ಸರ್ಕಾರದ ಅಧಿಸೂಚನೆ ಸಂ.ಸಿಆಸುಇ 43 ಸೇವನೆ 2008 ದಿನಾಂಕ:07/03/2012.
2) ಸರ್ಕಾರದ ಅಧಿಸೂಚನೆ ಸಂ.ಸಿಆಸುಇ 43 ಎಸ್‌ಸಿಆರ್ 2008 ದಿನಾಂಕ:18/12/2012.
3) ಸರ್ಕಾರದ ಅಧಿಸೂಚನೆ ಸಂ.ಸಿಆಸುಇ 154 ಎಸ್‌ಸಿಆರ್ 2014 ದಿನಾಂಕ:27/04/2015.
4) ಸರ್ಕಾರದ ಅಧಿಸೂಚನೆ ಸಂ.ಸಿಆಸುಇ 11 ಎಸ್‌ಸಿಆರ್ 2020 ದಿನಾಂಕ:15/05/2020.
5) ಸರ್ಕಾರದ ಟಿಪ್ಪಣಿ ಸಂ. ಸಿಆಸುಇ 215 ಇಜಿಎಂ 2019 ದಿನಾಂಕ:19/10/2020.

**ಪ್ರಸ್ತಾವನೆ:**

ಕರ್ನಾಟಕ ರಾಜ್ಯ ಸರ್ಕಾರದ ನೌಕರರಿಗೆ ಅನ್ವಯವಾಗುವಂತೆ, ಮೇಲಿನ ಕ್ರಮ ಸಂಖ್ಯೆ(1) ರಲ್ಲಿ ಓದಲಾದ ದಿನಾಂಕ:07/03/2012ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012ನ್ನು ರಚಿಸಲಾಗಿದೆ.

ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ರಾಜ್ಯದ ಎಲ್ಲಾ ಸರ್ಕಾರಿ ನೌಕರರಿಗೆ ಅನ್ವಯವಾಗುತ್ತದೆ ಹಾಗೂ ಸದರಿ ಪರೀಕ್ಷೆಯ ಪಠ್ಯಕ್ರಮವನ್ನು ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಸರ್ಕಾರದ ದಿನಾಂಕ:18/12/2012ರ ಅಧಿಸೂಚನೆಯಲ್ಲಿ ನಿಗದಿಪಡಿಸಲಾಗಿದೆ.

ಮೇಲಿನ ಕ್ರಮ ಸಂಖ್ಯೆ(3) ಮತ್ತು (4)ರಲ್ಲಿ ಓದಲಾದ ಸರ್ಕಾರದ ದಿನಾಂಕ:27/04/2015ರ ಅಧಿಸೂಚನೆಯಲ್ಲಿ ಕರ್ನಾಟಕ ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012ಕ್ಕೆ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಸೇವಾ ನಿಯಮಗಳು)ರವರು ಮೇಲೆ ಕ್ರಮ ಸಂಖ್ಯೆ(5)ರಲ್ಲಿ ನೀಡಿರುವ ಟಿಪ್ಪಣಿಯಲ್ಲಿ ಕರ್ನಾಟಕ ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ರಾಜ್ಯದ ಸರ್ಕಾರಿ ನೌಕರರಿಗೆ ಮಾತ್ರ ಅನ್ವಯವಾಗುತ್ತದೆ ಹಾಗೂ ಸದರಿ ನಿಯಮಗಳು ಸಾರ್ವಜನಿಕ ಉದ್ದಿಮೆಗಳ ಉದ್ಯೋಗಿಗಳಿಗೆ ಅನ್ವಯಿಸುವುದಿಲ್ಲವೆಂದು ತಿಳಿಸಿದ್ದು, ರಾಜ್ಯದ ಸಾರ್ವಜನಿಕ ಉದ್ದಿಮೆಗಳು 23 ಆಡಳಿತ ಇಲಾಖೆಗಳ ಕಾರ್ಯವ್ಯಾಪ್ತಿಗೆ ಬರುವ ಹಿನ್ನಲೆಯಲ್ಲಿ, ರಾಜ್ಯದ

...2/-

ಎಲ್ಲಾ ಸಾರ್ವಜನಿಕ ಉದ್ದಿಮೆಗಳಿಗೆ ಅನ್ವಯವಾಗುವ ಆದೇಶ/ಸುತ್ತೋಲೆ/ಮಾರ್ಗಸೂಚಿಗಳನ್ನು ಹೊರಡಿಸಲು ಎಲ್ಲಾ ಸಾರ್ವಜನಿಕ ಉದ್ದಿಮೆಗಳ ಉದ್ಯೋಗಿಗಳಿಗೆ ಅನ್ವಯವಾಗುವಂತೆ, ಕರ್ನಾಟಕ ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ಮತ್ತು ನಂತರದ ತಿದ್ದುಪಡಿಗಳನ್ನು ಆಧಾರವಾಗಿಟ್ಟುಕೊಂಡು ಮುಂದಿನ ಆದೇಶವನ್ನು ಹೊರಡಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಸಾಉಇ 4 ಎ ಆರ್ ಯು 2021,**

**ಬೆಂಗಳೂರು, ದಿನಾಂಕ: 29 ನೇ ಜನವರಿ 2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ ಎಲ್ಲಾ ಸಾರ್ವಜನಿಕ ಉದ್ದಿಮೆಗಳ ಉದ್ಯೋಗಿಗಳಿಗೆ ಅನ್ವಯವಾಗುವಂತೆ, ಕರ್ನಾಟಕ ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ಮತ್ತು ನಂತರದ ತಿದ್ದುಪಡಿಗಳನ್ನು ಆಧಾರವಾಗಿಟ್ಟುಕೊಂಡು ಈ ಕೆಳಗಿನಂತೆ ಆದೇಶಿಸಿದೆ;

1. ಈ ಆದೇಶವು ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. ಸಾರ್ವಜನಿಕ ಉದ್ದಿಮೆಗಳಲ್ಲಿನ ' ಡಿ ' ಗುಂಪಿನ ಹುದ್ದೆಗಳಿಗೆ ಆಯ್ಕೆಗೊಳ್ಳುವ ಅಥವಾ ಈ ಹುದ್ದೆಗಳನ್ನು ಹೊಂದಿರುವ ವ್ಯಕ್ತಿಗಳಿಗೆ ಈ ನಿಯಮಗಳು ಅನ್ವಯವಾಗತಕ್ಕದ್ದಲ್ಲ.

3. ನೇರ ನೇಮಕಾತಿಗೆ ಆಯ್ಕೆ ಪ್ರಕ್ರಿಯೆ:- ಆಯಾ ಸಾರ್ವಜನಿಕ ಉದ್ದಿಮೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅಥವಾ ಹುದ್ದೆಗೆ ಸಂಬಂಧಿಸಿದಂತೆ ವಿಶೇಷವಾಗಿ ರಚಿಸಿರುವ ಅಥವಾ ರಚಿಸಲಾಗಿದೆ ಎಂದು ಭಾವಿಸಲಾದ ನೇಮಕಾತಿ ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ ಕಂಡಿಕೆ-2 ರಲ್ಲಿ ನಿರ್ದಿಷ್ಟಪಡಿಸಿರುವ ಹುದ್ದೆಗಳನ್ನು ಹೊರತುಪಡಿಸಿ, ಯಾವುದೇ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಯು, ಅಭ್ಯರ್ಥಿಯ ಪರಿಕ್ಷಾರ್ಥ ಅವಧಿಯೊಳಗೆ ಅಥವಾ ಈ ಆದೇಶವು ಜಾರಿಯಾದ ದಿನಾಂಕದಿಂದ ಹತ್ತು ವರ್ಷದ ಒಳಗೆ, ಯಾವುದು ನಂತರವೋ ಆ ಅವಧಿಯಲ್ಲಿ ನಿಗದಿಪಡಿಸಿರುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು, ಶೇಕಡ 60 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು, ಪಾಸು ಮಾಡತಕ್ಕದ್ದು. ಅಂತಹ ಪರೀಕ್ಷೆಯನ್ನು ಸರ್ಕಾರ ಅಥವಾ ಅದು ಅನುಮೋದಿಸಿದ ಏಜೆನ್ಸಿಯು ನಡೆಸತಕ್ಕದ್ದು.

4. ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ ಅನ್ವಯಿಸುವುದು:- ಎಲ್ಲಾ ಸಾರ್ವಜನಿಕ ಉದ್ದಿಮೆಗಳ ಪ್ರತಿಯೊಬ್ಬ ಉದ್ಯೋಗಿಯು, ಕಂಡಿಕೆ-2 ರಲ್ಲಿ ನಿರ್ದಿಷ್ಟಪಡಿಸಿರುವ ಹುದ್ದೆಗಳಲ್ಲಿರುವವರನ್ನು ಹೊರತುಪಡಿಸಿ, ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗೆ ಹಾಜರಾಗಿ ಶೇಕಡ 35 ಕ್ಕಿಂತ ಕಡಿಮೆ ಇಲ್ಲದಂತೆ ಅಂಕಗಳನ್ನು ಗಳಿಸಿ ಪಾಸು ಮಾಡುವುದು ಕಡ್ಡಾಯ ಮಾಡತಕ್ಕದ್ದು, ಈ ಪರೀಕ್ಷೆಯನ್ನು ಸರ್ಕಾರ ಅಥವಾ ಅದು ಅನುಮೋದಿಸಿದ ಏಜೆನ್ಸಿಯು ನಡೆಸತಕ್ಕದ್ದು, ಸಾರ್ವಜನಿಕ ಉದ್ದಿಮೆಗಳ ಯಾವುದೇ ಉದ್ಯೋಗಿಯು, ಈ ಆದೇಶ ಹೊರಡಿಸಿದ ದಿನಾಂಕದಿಂದ ಹತ್ತು ವರ್ಷಗಳ ಅವಧಿಯೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣನಾಗದೇ ಇದ್ದಲ್ಲಿ ಮುಂಬಡ್ತಿಗೆ ಅರ್ಹನಾಗತಕ್ಕದ್ದಲ್ಲ. ಸಾರ್ವಜನಿಕ ಉದ್ದಿಮೆಗಳ ಯಾವುದೇ ಉದ್ಯೋಗಿಯು, ಈ ಆದೇಶದ ದಿನಾಂಕದಿಂದ ಹನ್ನೊಂದು ವರ್ಷಗಳ ಅವಧಿಯೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣನಾಗದೇ ಇದ್ದಲ್ಲಿ ವಾರ್ಷಿಕ ವೇತನ ಬಡ್ತಿ ಗಳಿಸಲು ಅರ್ಹನಾಗತಕ್ಕದ್ದಲ್ಲ. ಆದಾಗ್ಯೂ, ಈ ಆದೇಶದ ಪ್ರಾರಂಭದ ದಿನಾಂಕದಂದು 50 ವರ್ಷಗಳ ವಯಸ್ಸಾಗಿರುವ ಸಾರ್ವಜನಿಕ ಉದ್ದಿಮೆಗಳ ಯಾವುದೇ ಉದ್ಯೋಗಿಗೆ ಈ ಆದೇಶ ಅನ್ವಯವಾಗುವುದಿಲ್ಲ

5. ಆಯಾ ಸಾರ್ವಜನಿಕ ಉದ್ದಿಮೆಗಳ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶವಿದ್ದಲ್ಲಿ, ಸಾರ್ವಜನಿಕ ಉದ್ದಿಮೆಗಳ ಯಾವುದೇ ' ಡಿ ' ಸಮೂಹದ ಉದ್ಯೋಗಿಯು, ಈ ಆದೇಶದ ಪ್ರಾರಂಭದ ದಿನಾಂಕದಿಂದ ಹನ್ನೊಂದು ವರ್ಷಗಳ ಅವಧಿಯೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣನಾಗದ ಹೊರತು, ಕಿರಿಯ ಸಹಾಯಕ/ದ್ವಿತೀಯ ದರ್ಜೆ ಸಹಾಯಕ ಅಥವಾ ಸಮಾನ ಅಥವಾ ಉನ್ನತ ಹುದ್ದೆಯ ವೃಂದಕ್ಕೆ ವರ್ಗಾವಣೆಗೆ ಅಥವಾ ಮುಂಬಡ್ತಿಗೆ ಅರ್ಹನಾಗತಕ್ಕದ್ದಲ್ಲ.

6. ಯಾವುದೇ ವ್ಯಕ್ತಿಯು ನೇರ ನೇಮಕಾತಿ ಸಮಯದಲ್ಲಾಗಲೀ ಅಥವಾ ಸೇವಾನಿರತ ಅಭ್ಯರ್ಥಿಯಾಗಿ ಆಗಲೀ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಒಂದು ಸಲ ಉತ್ತೀರ್ಣನಾದಲ್ಲಿ, ಈ ನಿಯಮದಡಿ ಯಾವುದೇ ಉದ್ದೇಶಕ್ಕಾಗಿ ಮತ್ತೊಮ್ಮೆ ಇದೇ ಪರೀಕ್ಷೆಯಲ್ಲಿ ಉತ್ತೀರ್ಣನಾಗುವ ಅವಶ್ಯಕತೆಯಿಲ್ಲ.

7. ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗೆ ಪಠ್ಯಕ್ರಮವು, ಸರ್ಕಾರದ ಅಧಿಸೂಚನೆ ಸಂ.ಸಿಆಸುಇ 43 ಎಸ್ ಸಿಆರ್ 2008 ದಿನಾಂಕ:18/12/2012 ರಲ್ಲಿ ನಿಗದಿಪಡಿಸಲಾಗಿದೆ.

8. ಸರ್ಕಾರವು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಡೆಸಲು ಪ್ರಸ್ತುತ ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ(ಕಿಯೋನಿಕ್ಸ್)ವನ್ನು ನೇಮಕ ಮಾಡಿದ್ದು, ರಾಜ್ಯದ ಎಲ್ಲಾ ಸಾರ್ವಜನಿಕ ಉದ್ದಿಮೆಗಳು ಸದರಿ ಸಂಸ್ಥೆಯ ಮೂಲಕ ಸರ್ಕಾರ ನಿಗದಿಪಡಿಸಿರುವ ದರದಂತೆ, ತಮ್ಮ ಉದ್ಯೋಗಿಗಳಿಗೆ ಪರೀಕ್ಷೆಯನ್ನು ನಡೆಸಲು ಕ್ರಮವಹಿಸುವುದು ಹಾಗೂ ಸದರಿ ಖರ್ಚನ್ನು ಆಯಾ ಸಾರ್ವಜನಿಕ ಉದ್ದಿಮೆಗಳು ತಮ್ಮ ಆದಾಯದಿಂದ ಭರಿಸುವುದು.

9. ರಾಜ್ಯದ ಎಲ್ಲಾ ಸಾರ್ವಜನಿಕ ಉದ್ದಿಮೆಗಳು, ಈ ಆದೇಶದ ಗೆಜೆಟ್ ನಲ್ಲಿ ಪ್ರಕಟವಾದ ದಿನಾಂಕದಿಂದ ಒಂದು ತಿಂಗಳೊಳಗಾಗಿ ಸದರಿ ಮಾರ್ಗಸೂಚಿಗಳನ್ನು ಕಟ್ಟು ನಿಟ್ಟಾಗಿ ಪಾಲಿಸಲು ಸೂಕ್ತ ಕ್ರಮ ಕೈಗೊಳ್ಳುವುದು ಹಾಗೂ ಯಾವುದೇ ರೀತಿಯ ಗೊಂದಲಗಳಿದ್ದಲ್ಲಿ, ಅವಶ್ಯಕ ಸಂದರ್ಭಗಳಲ್ಲಿ ಮಾತ್ರ ಆಡಳಿತ ಇಲಾಖೆಯ ಮುಖಾಂತರ ಸಾರ್ವಜನಿಕ ಉದ್ದಿಮೆಗಳ ಇಲಾಖೆಯನ್ನು ಸಂಪರ್ಕಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

M-Gopalakrishna

(ಎಂ.ಗೋಪಾಲಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರ್ವಜನಿಕ ಉದ್ದಿಮೆಗಳ ಇಲಾಖೆ.

03/12

**ಪ್ರತಿಗಳು:**

1. ಆಡಳಿತ ಇಲಾಖೆಗಳ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಅನುಷ್ಠಾನ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

...4/-

3 ಸರ್ಕಾರದ ಕಾರ್ಯದರ್ಶಿ, ಸಿ.ಆ.ಸು.ಇ., ವಿಧಾನಸೌಧ, ಬೆಂಗಳೂರು.

4. ಪ್ರಧಾನ ಮಹಾಲೇಖಪಾಲರು, ಕರ್ನಾಟಕ ವಲಯ, ಬೆಂಗಳೂರು

5. ಎಲ್ಲಾ ಸಾರ್ವಜನಿಕ ವಲಯ ಉದ್ಯಮಗಳ ವ್ಯವಸ್ಥಾಪಕ ನಿರ್ದೇಶಕರುಗಳು

6. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

7. ರಾಜ್ಯಪತ್ರದ ಪ್ರಕಟಣೆಗೆ.

8. ಶಾಖೆಯ ರಕ್ಷಾಕಡತ/ಬಿಡಿ ಪ್ರತಿಗಳು.